### ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ಸರ್ಕಾರಿ ವಿಮಾ ಇಲಾಖೆಯ ಕಡ್ಡಾಯ ಜೀವ ವಿಮಾ ಯೋಜನೆಯಡಿ ದಿನಾಂಕ:01/04/2018 ರಿಂದ 31/03/2020 ಕ್ಕೆ ಅಂತ್ಯಗೊಂಡ ದ್ವೈವಾರ್ಷಿಕ ಅವಧಿಗೆ ವಿಮಾ ಮೌಲ್ಯಮಾಪನ ವರದಿಯ ಆಧಾರದ ಮೇಲೆ ಜೀವ ವಿಮಾ ಪಾಲಿಸಿಗಳ ಸ್ಥಿರಪಡಿಸಿದ ಮೊತ್ತದ ಮೇಲೆ ಬೋನಸ್ ನೀಡಲು ಸರ್ಕಾರದ ಮಂಜೂರಾತಿ ನೀಡುವ ಬಗ್ಗೆ.

**ಓದಲಾಗಿದೆ:** ನಿರ್ದೇಶಕರು, ಕರ್ನಾಟಕ ಸರ್ಕಾರಿ ವಿಮಾ ಇಲಾಖೆ, ಬೆಂಗಳೂರು, ಇವರ ಪತ್ರ ಸಂಖ್ಯೆ: ವಿನಿ/ಎಜಿವಿ/ಮೌಮಾ1820/2011/2023-24, ದಿನಾಂಕ: 11/01/2024.

**//**//**

**ಪ್ರಸ್ತಾವನೆ:**

ನಿರ್ದೇಶಕರು, ಕರ್ನಾಟಕ ಸರ್ಕಾರಿ ವಿಮಾ ಇಲಾಖೆ, ಇವರು ಮೇಲೆ ಓದಲಾದ ಪತ್ರದಲ್ಲಿ ಕರ್ನಾಟಕ ಸರ್ಕಾರಿ ವಿಮಾ ಇಲಾಖೆಯಲ್ಲಿ ನಿರ್ವಹಿಸಲಾಗುತ್ತಿರುವ ಕಡ್ಡಾಯ ಜೀವ ವಿಮಾ ಯೋಜನೆಗೆ ಸಂಬಂಧಿಸಿದಂತೆ ಕರ್ನಾಟಕ ಸರ್ಕಾರಿ ನೌಕರರ (ಕಡ್ಡಾಯ ಜೀವ ವಿಮಾ) ನಿಯಮಗಳು, 1958ರ ನಿಯಮ-22ರನ್ವಯ ವಿಮಾ ಮೌಲ್ಯಮಾಪನವನ್ನು ದ್ವೈವಾರ್ಷಿಕವಾಗಿ ಮಾಡಿಸಬೇಕಾಗಿದ್ದು, ಅದರನ್ವಯ 2018-2020ನೇ ದ್ವೈವಾರ್ಷಿಕ ಅವಧಿಯಲ್ಲಿ ಚಾಲ್ತಿಯಲ್ಲಿದ್ದ ವಿಮಾ ಪಾಲಿಸಿಗಳ ಮೌಲ್ಯಮಾಪನವನ್ನು ನಡೆಸಿ, ಅಧಿಲಾಭಾಂಶವನ್ನು ಘೋಷಿಸಲು ಅನುವಾಗುವಂತೆ ಮೌಲ್ಯಮಾಪನ ಕಾರ್ಯ ಕೈಗೊಳ್ಳಲು ವಿಮಾ ಗಣಕಕಾರರನ್ನು ನೇಮಿಸಲಾಗಿತ್ತೆಂದು ಮತ್ತು ವಿಮಾ ಗಣಕಕಾರರು 2018-2020ನೇ ಅವಧಿಗೆ ಸಂಬಂಧಿಸಿದಂತೆ ಮೌಲ್ಯಮಾಪನ ಕಾರ್ಯವನ್ನು ಪೂರ್ಣಗೊಳಿಸಿ ಮೌಲ್ಯಮಾಪನ ವರದಿಯನ್ನು ಸಲ್ಲಿಸಿದ್ದಾರೆಂದು ವರದಿ ಮಾಡಿದ್ದಾರೆ. ಸದರಿ ಮೌಲ್ಯಮಾಪನ ವರದಿಯ ಪ್ರಮುಖ ಅಂಶಗಳು ಕೆಳಕಂಡಂತಿವೆ:-

| | | |
|---|---|---|
| 1. | ಚಾಲ್ತಿಯಲ್ಲಿದ್ದ ಪಾಲಿಸಿಗಳ ಸಂಖ್ಯೆ | : 12,97,054 |
| 2. | ವಿಮಾ ಮೊಬಲಗು | : ರೂ. 32,271.80 ಕೋಟಿಗಳು |
| 3. | ಪ್ರತ್ಯಾವರ್ತಿ ಅಧಿಲಾಭಾಂಶ | : ರೂ. 11,956.56 ಕೋಟಿಗಳು |
| 4. | ವಾರ್ಷಿಕ ವಿಮಾ ಕಂತು ಆದಾಯ | : ರೂ. 1631.58 ಕೋಟಿಗಳು |
| 5. | ಜೀವ ವಿಮಾ ನಿಧಿಯ ಶಿಲ್ಕು | : ರೂ. 15,164.43 ಕೋಟಿಗಳು |
| 6. | ವಿಮಾ ಪಾಲಿಸಿಗಳವಿಮಾ ಮೊತ್ತದ ಮೇಲಿನ ಹೊಣೆಗಾರಿಕೆ | : ರೂ. 5,163.48 ಕೋಟಿಗಳು |
| 7. | ಮೌಲ್ಯಮಾಪನದ ಹೆಚ್ಚುವರಿ (Surplus) | : ರೂ. 1,769.28 ಕೋಟಿಗಳು |

ವಿಮಾ ಗಣಕರು ತಮ್ಮ ವರದಿಯಲ್ಲಿ ದಿನಾಂಕ:31/03/2020 ರಂದು ಚಾಲ್ತಿಯಲ್ಲಿರುವ ಎಲ್ಲಾ ಪಾಲಿಸಿಗಳಿಗೆ ಪ್ರತಿ ಸಾವಿರ ವಿಮಾ ಮೊತ್ತಕ್ಕೆ ಪ್ರತಿ ವರ್ಷಕ್ಕೆ ರೂ.80/- ರಂತೆ ಪ್ರತ್ಯಾವರ್ತಿ ಲಾಭಾಂಶವನ್ನು ಘೋಷಿಸಲು ಹಾಗೂ ಈ ಉದ್ದೇಶಕ್ಕಾಗಿ ಮೌಲ್ಯಮಾಪನದ ಅನುಸಾರ ಒಟ್ಟಾರೆಯಾಗಿ ಹೆಚ್ಚಳವಾಗಿರುವ ರೂ.1769.28 ಕೋಟಿಗಳಲ್ಲಿ ರೂ.1711.89 ಕೋಟಿಗಳನ್ನು ಸರಳ ಪ್ರತ್ಯಾವರ್ತಿ ಲಾಭಾಂಶವಾಗಿ ವಿತರಣೆ ಮಾಡಲು ಹಾಗೂ

Bhagyapuls

.......2

ಉಳಿದ ರೂ.57.39 ಕೋಟಿ ಮೊತ್ತವನ್ನು ಅವರ್ಗೀಕೃತವಾಗಿ ಮುಂದುವರಿಸಲ್ಪಟ್ಟ ಮೊಬಲಗು ಎಂದು ಪರಿಗಣಿಸಿ ಮುಂದಿನ ಮೌಲ್ಯಮಾಪನ ಅವಧಿಗೆ ಕೊಂಡೊಯ್ಯಲು ವಿಮಾ ಗಣಕರು ಶಿಫಾರಸ್ಸು ಮಾಡಿರುತ್ತಾರೆ.

ನಿರ್ದೇಶಕರು, ಕರ್ನಾಟಕ ಸರ್ಕಾರಿ ವಿಮಾ ಇಲಾಖೆ, ಇವರು ವಿಮಾ ಗಣಕರು ಮೌಲ್ಯಮಾಪನ ವರದಿಯಲ್ಲಿ ಮಾಡಿರುವ ಶಿಫಾರಸ್ಸುಗಳನ್ನು ಪರಿಗಣಿಸಿ, ದಿನಾಂಕ:31/03/2020 ರಂದು ಚಾಲ್ತಿಯಲ್ಲಿದ್ದ ಪಾಲಿಸಿಗಳ ಮೇಲೆ ವಿಮಾ ಮೊತ್ತದ ಪ್ರತಿ ರೂ.1000/-ಗಳಿಗೆ ವಾರ್ಷಿಕವಾಗಿ ರೂ.80/-ರ ದರದಲ್ಲಿ ಬೋನಸ್ ನೀಡುವುದರ ಜೊತೆಗೆ ದಿನಾಂಕ:01/04/2020 ರಿಂದ 31/03/2022ರ ಅವಧಿಯಲ್ಲಿ ಅವಧಿಪೂರ್ಣ, ಮರಣಜನ್ಯ ಹಾಗೂ ಎಲ್ಲಾ ವಿಮಾ ತ್ಯಾಗ ಮೌಲ್ಯಗಳಿಂದ ಹೊರಹೋಗಿರುವ ಪಾಲಿಸಿಗಳಿಗೆ ಮುಂದಿನ ಮೌಲ್ಯಮಾಪನ ಅವಧಿಯವರೆಗೆ ಪ್ರತಿ ರೂ.1000/-ಗಳಿಗೆ ವಾರ್ಷಿಕವಾಗಿ ರೂ.80/-ಗಳ ಮಧ್ಯಂತರ ಅಧಿಲಾಭಾಂಶವನ್ನು ನೀಡಲು ಈ ಕೆಳಕಂಡ ನಿರ್ದಿಷ್ಟ ಪ್ರಸ್ತಾವನೆಗಳಿಗೆ ಸರ್ಕಾರದ ಅನುಮೋದನೆಯನ್ನು ಕೋರಿರುತ್ತಾರೆ:-

(i) ದಿನಾಂಕ: 01/04/2018 ರಿಂದ 31/03/2020 ರ ದ್ವೈವಾರ್ಷಿಕ ಅವಧಿಯಲ್ಲಿ ಚಾಲ್ತಿಯಲ್ಲಿದ್ದ ಎಲ್ಲಾ ಪಾಲಿಸಿಗಳಿಗೆ ವಿಮಾ ಮೊತ್ತದ ಮೇಲೆ ಪ್ರತಿ ಸಾವಿರ ರೂಪಾಯಿಗಳಿಗೆ ಪ್ರತಿ ವರ್ಷಕ್ಕೆ ರೂ.80/-ರಂತೆ ಲಾಭಾಂಶ(Bonus) ಘೋಷಿಸುವುದು.

(ii) ಅವಧಿ ಪೂರ್ಣ, ಮರಣಜನ್ಯ ಹಾಗೂ ವಿಮಾ ತ್ಯಾಗ ಮೌಲ್ಯಗಳಿಂದ ದಿನಾಂಕ:01/04/2020 ರಿಂದ 31/03/2022 ರ ಅವಧಿಯಲ್ಲಿ ಹೊರ ಹೋಗಿರುವ ವಿಮಾ ಪಾಲಿಸಿಗಳಿಗೆ ಪ್ರತಿ ಸಾವಿರ ರೂಪಾಯಿಗಳಿಗೆ ಪ್ರತಿ ವರ್ಷಕ್ಕೆ ರೂ.80/-ರಂತೆ ಮಧ್ಯಂತರ ಲಾಭಾಂಶವನ್ನು(Interim Bonus) ಘೋಷಿಸುವುದು.

ಸರ್ಕಾರವು ಈ ಪ್ರಸ್ತಾವನೆಯನ್ನು ವಿವರವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆಇ 09 ಕವಿಇ 2024,**
**ಬೆಂಗಳೂರು, ದಿನಾಂಕ: 11ನೇ ಜುಲೈ, 2024.**

ಕರ್ನಾಟಕ ಸರ್ಕಾರಿ ವಿಮಾ ಇಲಾಖೆಯು ನಿರ್ವಹಿಸುತ್ತಿರುವ ಕಡ್ಡಾಯ ಜೀವ ವಿಮಾ ಯೋಜನೆಗೆ ಸಂಬಂಧಿಸಿದಂತೆ, 2018-2020 ರ ದ್ವೈವಾರ್ಷಿಕ ಅವಧಿಗೆ ವಿಮಾ ಮೌಲ್ಯಮಾಪನ ವರದಿಯನ್ನು ಆಧರಿಸಿ ಈ ಕೆಳಕಂಡಂತೆ ಬೋನಸ್ ನೀಡಲು ಸರ್ಕಾರದ ಮಂಜೂರಾತಿಯನ್ನು ನೀಡಿದೆ.

(i) ದಿನಾಂಕ: 01/04/2018 ರಿಂದ 31/03/2020 ರ ದ್ವೈವಾರ್ಷಿಕ ಅವಧಿಯಲ್ಲಿ ಚಾಲ್ತಿಯಲ್ಲಿದ್ದ ಎಲ್ಲಾ ಪಾಲಿಸಿಗಳಿಗೆ ವಿಮಾ ಮೊತ್ತದ ಮೇಲೆ ಪ್ರತಿ ಸಾವಿರ ರೂಪಾಯಿಗಳಿಗೆ ಪ್ರತಿ ವರ್ಷಕ್ಕೆ ರೂ.80/-ರಂತೆ ಲಾಭಾಂಶ(Bonus) ನೀಡುವುದು.

.......3

(ii) ಅವಧಿ ಪೂರ್ಣ, ಮರಣಜನ್ಯ ಹಾಗೂ ವಿಮಾ ತ್ಯಾಗ ಮೌಲ್ಯಗಳಿಂದ ದಿನಾಂಕ:01/04/2020 ರಿಂದ 31/03/2022 ರ ಅವಧಿಯಲ್ಲಿ ಹೊರ ಹೋಗಿರುವ ವಿಮಾ ಪಾಲಿಸಿಗಳಿಗೆ ಪ್ರತಿ ಸಾವಿರ ರೂಪಾಯಿಗಳಿಗೆ ಪ್ರತಿ ವರ್ಷಕ್ಕೆ ರೂ.80/-ರಂತೆ ಮಧ್ಯಂತರ ಲಾಭಾಂಶವನ್ನು(Interim Bonus) ನೀಡುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ನೇತ್ರಪ್ರಭಾ ಎಂ. ಧಾಯಪುಲೆ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಆಡಳಿತ ಮತ್ತು ಮುಂಗಡಗಳು).

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು - ಇವರಿಗೆ ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸಲು.

ಪ್ರತಿ:

1. ಪ್ರಧಾನ ಮಹಾಲೇಖಪಾಲರು (ಎ ಮತ್ತು ಇ) ಕರ್ನಾಟಕ, ಪಿ.ಒ.ಬಾಕ್ಸ್ ನಂ.5329/5369, ಪಾರ್ಕ್ ಹೌಸ್ ರೋಡ್, ಬೆಂಗಳೂರು - 560 001.
2. ಪ್ರಧಾನ ಮಹಾಲೇಖಪಾಲರು (ಜನರಲ್ & ಸೋಷಿಯಲ್ ಸೆಕ್ಟರ್ ಆಡಿಟ್), ಕರ್ನಾಟಕ, ನ್ಯೂ ಬಿಲ್ಡಿಂಗ್, ಆಡಿಟ್ ಭವನ, ಪಿ.ಬಿ.ನಂ.5398, ಬೆಂಗಳೂರು - 560 001.
3. ಪ್ರಧಾನ ಮಹಾಲೇಖಪಾಲರು (ಎಕನಾಮಿಕ್ & ರೆವೆನ್ಯೂ ಸೆಕ್ಟರ್ ಆಡಿಟ್), ಕರ್ನಾಟಕ, ನ್ಯೂ ಬಿಲ್ಡಿಂಗ್, ಆಡಿಟ್ ಭವನ, ಪಿ.ಬಿ.ನಂ.5398, ಬೆಂಗಳೂರು - 560 001.
4. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
5. ಎಲ್ಲಾ ಜಿಲ್ಲಾಧಿಕಾರಿಗಳು / ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
6. ಆಯುಕ್ತರು, ಖಜಾನೆ ಆಯುಕ್ತಾಲಯ, 6ನೇ ಮಹಡಿ, ಕೆಪಿಸಿಎಲ್ ಗ್ರೀನ್ ಬಿಲ್ಡಿಂಗ್, ಔಷಧ ನಿಯಂತ್ರಣ ಕಟ್ಟಡದ ಆವರಣ, ಅರಮನೆ ರಸ್ತೆ, ಬೆಂಗಳೂರು.
7. ನಿರ್ದೇಶಕರು, ಕರ್ನಾಟಕ ಸರ್ಕಾರಿ ವಿಮಾ ಇಲಾಖೆ, ನಿರ್ದೇಶನಾಲಯ, 17ನೇ ಮಹಡಿ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, ಡಾ॥ ಅಂಬೇಡ್ಕರ್ ವೀಧಿ, ಬೆಂಗಳೂರು - 560 001.
8. ಎಲ್ಲಾ ಉಪ ನಿರ್ದೇಶಕರುಗಳಿಗೆ / ಎಲ್ಲಾ ಜಿಲ್ಲಾ ವಿಮಾಧಿಕಾರಿಗಳಿಗೆ - ನಿರ್ದೇಶಕರು, ಕರ್ನಾಟಕ ಸರ್ಕಾರಿ ವಿಮಾ ಇಲಾಖೆ, ಬೆಂಗಳೂರು, ಇವರ ಮುಖಾಂತರ.
9. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಚಿವ ಸಂಪುಟ ಶಾಖೆ - ಪ್ರಕರಣ ಸಂಖ್ಯೆ: ಸಿ-335/2024, ದಿನಾಂಕ: 04/07/2024 ರನ್ವಯ - ಮಾಹಿತಿಗಾಗಿ.

......4

10. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
11. ಶಾಖಾಧಿಕಾರಿ, ಆರ್ಥಿಕ ಇಲಾಖೆ (ಗಣಕ ಕೋಶ) - ಆರ್ಥಿಕ ಇಲಾಖೆಯ ವೆಬ್‌ಸೈಟ್ ನಲ್ಲಿ ಅಪ್‌ಲೋಡ್ ಮಾಡಲು.
12. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
13. ಸರ್ಕಾರದ ಕಾರ್ಯದರ್ಶಿ (ಆಯವ್ಯಯ ಮತ್ತು ಸಂಪನ್ಮೂಲ) ರವರ ಆಪ್ತ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
14. ಸರ್ಕಾರದ ಉಪ ಕಾರ್ಯದರ್ಶಿ (ಆಡಳಿತ ಮತ್ತು ಸಮನ್ವಯ) ರವರ ಆಪ್ತ ಸಹಾಯಕರು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
15. ಕಛೇರಿ ಪ್ರತಿ / ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ★ ಬೆಂಗಳೂರು ★